ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ


"ವಾರ್ತಾ ಭವನ", ನ್ಯಾಯಾಲಯ ಆವರಣ, ಬೆಳಗಾವಿ-590002. (ದೂರವಾಣಿ ಸಂ: 0831-2420344)

ಅಭಿನಂದನೆಗಳೊಂದಿಗೆ ಪ್ರಕಟಣೆಯ ಕೃಪೆಗಾಗಿ ದಿನಾಂಕ: 21-12-2018

ಇ-ಮೇಲ್:- varthabhavanbelagavi@gmail.com ಚಳಿಗಾಲ ಅಧಿವೇಶನ-2018 ಸುವರ್ಣ ವಿಧಾನ ಸೌಧ, ಬೆಳಗಾವಿ


ವಾವಿಸಂ.01

## ಪತ್ರಿಕಾ ಪ್ರಕಟಣೆ

## ಬೆಳಗಾವಿ ಅಧಿವೇಶನ ಕಲಾಪ ತೃಪ್ತಿಕರ : ವಿಧಾನಸಭಾಧ್ಯಕ್ಷ ಕೆ.ಆರ್. ರಮೇಶ್ ಕುಮಾರ್

ಬೆಳಗಾವಿ, ಡಿಸೆಂಬರ್ 21 (ಕರ್ನಾಟಕ ವಾರ್ತೆ): ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 10 ರಿಂದ ನಡೆದ 15ನೇ ವಿಧಾನಸಭೆಯ 2ನೇ ಅಧಿವೇಶನ ತೃಪ್ತಿಕರವಾಗಿ ಮುಕ್ತಾಯಗೊಂಡಿದೆ ಎಂದು ವಿಧಾನಸಭಾಧ್ಯಕ್ಷ ಕೆ.ಆರ್. ರಮೇಶ್‌ಕುಮಾರ್ ತಿಳಿಸಿದ್ದಾರೆ.

ಹತ್ತು ದಿನಗಳ ಕಲಾಪ ಇಂದಿಗೆ ಮುಕ್ತಾಯಗೊಂಡ ನಂತರ ಸುವರ್ಣ ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಅವರು ಡಿಸೆಂಬರ್ 10 ರಿಂದ 21 ರ ವರೆಗೆ 40 ಗಂಟೆ 45 ನಿಮಿಷಗಳ ಕಾಲ ಅಧಿವೇಶನದಲ್ಲಿ ಕಲಾಪಗಳು ನಡೆದಿದ್ದು, ವಿಧಾನಸಭೆಯ ಕಾರ್ಯಕಲಾಪಗಳು ಸಮಾಧಾನ ಮತ್ತು ತೃಪ್ತಿ ತಂದಿದೆ ಎಂದು ತಿಳಿಸಿದರು.

ಅಧಿವೇಶನ ಆರಂಭದ ದಿನದಲ್ಲಿ ಇತ್ತಿಚಿಗೆ ನಿಧನರಾದ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ, ಕೇಂದ್ರ ಸಚಿವ ಹೆಚ್.ಎನ್. ಅನಂತಕುಮಾರ್, ಕೇಂದ್ರದ ಮಾಜಿ ಸಚಿವರಾದ ಸಿ.ಕೆ. ಜಾಫರ್ ಷರೀಫ್, ಡಾ. ಎಂ.ಹೆಚ್. ಅಂಬರೀಷ್, ರಾಜ್ಯದ ಮಾಜಿ ಸಚಿವರಾಗಿದ್ದ ತಿಪ್ಪೇಸ್ವಾಮಿ, ಈಟಿ ಶಂಭುನಾಥ್, ಓಂಪ್ರಕಾಶ ಕಣಗಲಿ, ವಿಮಲಾಬಾಯಿ ದೇಶಮುಖ, ಶಾಸಕರಾಗಿದ್ದ ಮಲ್ಲಪ್ಪ ವೀರಪ್ಪ ಶೆಟ್ಟಿ. ವಿಶ್ವನಾಥ ಕರಬಸಪ್ಪ ಮಾಮನಿ, ಎಂ.ಪಿ. ರವೀಂದ್ರ, ಬಾಬುರೆಡ್ಡಿ ವೆಂಕಪ್ಪ ತುಂಗಳ, ಹೆಚ್.ಎಸ್. ಪ್ರಕಾಶ್, ಎಂ. ಭಕ್ತವತ್ಸಲಂ ಮತ್ತು ಕರಿಯಣ್ಣ ಅವರುಗಳ ನಿಧನಕ್ಕೆ ಸಂತಾಪ ಸೂಚನಾ ನಿರ್ಣಯ ಮಂಡಿಸಿ ಅಂಗೀಕರಿಸಲಾಗಿದೆ ಎಂದು ಅವರು ತಿಳಿಸಿದರು.

2018–19 ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತನ್ನು ವಿಧಾನಸಭೆಯಲ್ಲಿ ಮಂಡಿಸಿ ಚರ್ಚೆ ನಡೆಸಿ ಅಂಗೀಕರಿಸಲಾಗಿದೆ. 2018–19 ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸಲಾಯಿತು. ಭಾರತ ಸಂವಿಧಾನದ 151 (2) ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 2017 ಮಾರ್ಚ್ 31 ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಘನ ತ್ಯಾಜ್ಯ

ನಿರ್ವಹಣೆಯ ಮೇಲಿನ ಕಾರ್ಯನಿರ್ವಹಣೆಯ ಲೆಕ್ಕಪರಿಶೋಧನಾ ವರದಿ ಮತ್ತು ಸರ್ಕಾರಿ ಭೂಮಿ ಮಂಜೂರಾತಿ, ಗುತ್ತಿಗೆ, ಒತ್ತುವರಿಗಳ ತೆರವುಗೊಳಿಸುವಿಕೆ ಹಾಗೂ ಅಕ್ರಮ ಹಿಡುವಳಿಗಳನ್ನು ಸಕ್ರಮಗೊಳಿಸುವಿಕೆಗಳ ವರದಿಗಳನ್ನು ಮಂಡಿಸಲಾಗಿದೆ ಎಂದು ಸಭಾಧ್ಯಕ್ಷರು ವಿವರಿಸಿದರು.

ಅಲ್ಲದೇ 15ನೇ ವಿಧಾನಸಭೆಯ ವಿವಿಧ ಸಮಿತಿಗಳ ವರದಿಗಳನ್ನು ಸದನದಲ್ಲಿ ಮಂಡಿಸಲಾಗಿದೆ ಹಾಗೂ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡಾವಳಿಯ ವಿವಿಧ ನಿಯಮಾವಳಿಗಳಂತೆ ಚರ್ಚೆಗಳನ್ನು ನಡೆಸಲಾಗಿದೆ. ಒಟ್ಟು 3060 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಸದನದಲ್ಲಿ ಉತ್ತರಿಸುವ 146 ಕ್ಕೆ ಹಾಗೂ ಲಿಖಿತ ಮೂಲಕ ಉತ್ತರಿಸುವ 2217 ಪ್ರಶ್ನೆಗಳ ಪೈಕಿ 1978 ಪ್ರಶ್ನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿದೆ ಎಂದರು.

ಒಟ್ಟು 12 ವಿಧೇಯಕಗಳನ್ನು ಮಂಡಿಸಲಾಗಿದ್ದು, 8 ವಿಧೇಯಕಗಳನ್ನು ಅಂಗೀಕರಿಸಲಾಗಿದೆ. ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2018ನೇ ಸಾಲಿನ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು (ತಿದ್ದುಪಡಿ) ವಿಧೇಯಕವನ್ನು ಪುನರ್‌ಪರ್ಯಾಲೋಚಿಸಿ ಅಂಗೀಕರಿಸಲಾಗಿದೆ. ರಾಜೀವ್‌ಗಾಂಧೀ ಆರೋಗ್ಯ ವಿಶ್ವವಿದ್ಯಾಲಯದ ಸೆನೆಟ್‌ಗೆ 3 ಜನ ಸದಸ್ಯರನ್ನು ನಾಮನಿರ್ದೇಶನ ಮಾಡಲು ವಿಧಾನಸಭೆ ಸಭಾಧ್ಯಕ್ಷರಿಗೆ ಇಂದು ಅಧಿಕಾರ ನೀಡಿರುತ್ತದೆ ಎಂದು ಅವರು ವಿವರಿಸಿದರು.

ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತು, ಮರಳು ಸಮಸ್ಯೆ ಕುರಿತು, ನೀರಾವರಿ ವಿಷಯಗಳ ಕುರಿತು ಹಾಗೂ ಬೆಂಗಳೂರಿನ ಬಿ.ಎಂ. ಕಾವಲು ಪ್ರದೇಶದ ಸರ್ಕಾರಿ ಭೂಮಿ ಪರಭಾರೆ ವಿಷಯಗಳ ಕುರಿತು ಮಹತ್ವದ ಚರ್ಚೆಯ ಅಗತ್ಯವಿತ್ತು. ಅದನ್ನು ಹೊರತುಪಡಿಸಿ ಒಟ್ಟಾರೆ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನದ ಕಾರ್ಯಕಲಾಪಗಳು ಸಮಾಧಾನ ತಂದಿವೆ ಎಂದು ಸಭಾಧ್ಯಕ್ಷರು ತಿಳಿಸಿದರು.

***************

ವಾವಿಸಂ.

## ವಿಧಾನ ಪರಿಷತ್ 9 ವಿಧೇಯಕಗಳ ಅಂಗೀಕಾರ
## ಅನಿರ್ದಿಷ್ಟಾವಧಿ ಮುಂದೂಡಿಕೆ

**ಬೆಳಗಾವಿ, ಡಿಸೆಂಬರ್ 21 (ಕರ್ನಾಟಕ ವಾರ್ತೆ):** ವಿಧಾನ ಪರಿಷತ್ತಿನ 136 ನೇ ಅಧಿವೇಶನದ ಉಪವೇಶನವು ಕಳೆದ ಡಿಸೆಂಬರ್ 10 ರಿಂದ ಇಂದು ಡಿಸೆಂಬರ್ 21 ರವರೆಗೆ ಒಟ್ಟು ಹತ್ತು ದಿನಗಳ ಕಾಲ ನಡೆಯಿತು. ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಒಂಬತ್ತು

ವಿಧೇಯಕಗಳಿಗೆ ಮೇಲ್ಮನೆ ಅಂಗೀಕಾರ ನೀಡಿತು. ಶೂನ್ಯ ವೇಳೆಯಲ್ಲಿ 47 ಸೂಚನೆಗಳನ್ನು ಸ್ವೀಕರಿಸಿ, 22 ಸೂಚನೆಗಳಿಗೆ ಉತ್ತರಿಸಲಾಯಿತು ಎಂದು ತಿಳಿಸಿದ ಸಭಾಪತಿ ಕೆ.ಪ್ರತಾಪ ಚಂದ್ರಶೆಟ್ಟಿ ಅವರು ಸದನವನ್ನು ಅನಿರ್ದಿಷ್ಟಾವಧಿಯವರೆಗೆ ಮುಂದೂಡಲಾಗಿದೆ ಎಂದು ಪ್ರಕಟಿಸಿದರು.

ಮೇಲ್ಮನೆಯಲ್ಲಿ ಬೆಳಗ್ಗೆ 11 ಗಂಟೆಗೆ ಕಲಾಪ ಆರಂಭವಾಗುತ್ತಿದ್ದಂತೆ ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ಚರ್ಚೆಗೆ ಅವಕಾಶ ನೀಡಬೇಕೆಂದು ಪ್ರತಿಪಕ್ಷದ ಸದಸ್ಯರು ಧರಣಿ ಮುಂದುವರೆಸಿದರು. ಸದನವನ್ನು ಮಧ್ಯಾಹ್ನ 12 ಗಂಟೆಗೆ ಸಭಾಪತಿಗಳು ಮುಂದೂಡಿದರು. ಬಳಿಕ ಮಧ್ಯಾಹ್ನ 12 ಗಂಟೆಗೆ ಸದನ ಮರುಸಮಾವೇಶಗೊಂಡಾಗ ಪ್ರತಿಪಕ್ಷಗಳ ಪ್ರತಿಭಟನೆಯ ಮಧ್ಯೆಯೇ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ಸಭಾನಾಯಕಿ ಡಾ|| ಜಯಮಾಲಾ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣಭೈರೇಗೌಡ ಅವರು ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಎರಡು ವಿಧೇಯಕಗಳನ್ನು ಮಂಡಿಸಿ, ರಾಜ್ಯ ವಿಧಾನ ಪರಿಷತ್ತಿನಿಂದ ಅಂಗೀಕಾರ ಪಡೆದರು.

ಪ್ರಸ್ತುತ ಅಧಿವೇಶನದಲ್ಲಿ 1347 ಪ್ರಶ್ನೆಗಳನ್ನು ಸ್ವೀಕರಿಸಲಾಗಿತ್ತು. 150 ಪ್ರಶ್ನೆಗಳು ಚುಕ್ಕೆ ಗುರುತಿನ ಪ್ರಶ್ನೆಗಳಾಗಿದ್ದವು. 123 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು. 27 ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು. ಒಟ್ಟು 1197 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಪೈಕಿ 889 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರವನ್ನು ಮಂಡಿಸಲಾಯಿತು.

ನಿಯಮ 58ರ ಅಡಿ ಅರ್ಧ ಗಂಟೆ ಕಾಲಾವಧಿ ಚರ್ಚೆಯಡಿ ಮೂರು ಸೂಚನೆಗಳನ್ನು ಸ್ವೀಕರಿಸಲಾಯಿತು. ನಿಯಮ 72ರ ಅಡಿಯಲ್ಲಿ 224 ಸೂಚನೆಗಳನ್ನು ಸ್ವೀಕರಿಸಿ, ಆ ಪೈಕಿ ಎಂಟು ಸೂಚನೆಗಳಿಗೆ ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು. ಉಳಿದ 216 ಸೂಚನೆಗಳ ಪೈಕಿ 41 ಸೂಚೆನಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು. ನಿಯಮ 330ರ ಅಡಿಯಲ್ಲಿ 105 ಸೂಚನೆಗಳನ್ನು ಸ್ವೀಕರಿಸಿ, ಆ ಪೈಕಿ ಏಳು ಸೂಚನೆಗಳನ್ನು ಸದನದಲ್ಲಿ ಚರ್ಚಿಸಿ ಉತ್ತರಿಸಲಾಯಿತು. ಉಳಿದ 98 ಸೂಚನೆಗಳ ಪೈಕಿ 19 ಸೂಚನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 59ರ ಅಡಿಯಲ್ಲಿ ಮೂರು ಸೂಚನೆಗಳನ್ನು ಸ್ವೀಕರಿಸಿ, ಆ ಪೈಕಿ ಎರಡು ಸೂಚನೆಗಳನ್ನು ನಿಯಮ 68ಕ್ಕೆ ಪರಿವರ್ತಿಸಿ ಸರ್ಕಾರದಿಂದ ಉತ್ತರಿಸಲಾಯಿತು. ನಿಯಮ 68ರ ಅಡಿಯಲ್ಲಿ ಎರಡು ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ ಎಂದು ಸಭಾಪತಿ ಕೆ.ಪ್ರತಾಪ ಚಂದ್ರಶೆಟ್ಟಿ ಅವರು ವಿಧಾನ ಪರಿಷತ್ತಿನ ಪ್ರಸ್ತುತ ಅಧಿವೇಶನದ ಉಪವೇಶನದ ಸಾರಾಂಶದಲ್ಲಿ ದಾಖಲಿಸಿದ್ದಾರೆ.

********